1. (ಅ) ಚುಕ್ಕೆ ಗುರುತಿಲ್ಲದ ಪ್ರಶ್ನೆಗಳಿಗೆ ಲಿಖಿತ ಮೂಲಕ ನೀಡಲಾದ ಉತ್ತರಗಳು

ಶ್ರೀ ಕೆ.ಹೆಚ್.ರಂಗನಾಥ್ (ಅರಣ್ಯ ಸಚಿವರು) : ಮಾನ್ಯ ಅಧ್ಯಕ್ಷರೆ, ಹದಿನೇಳನೆಯ ಪಟ್ಟಿಯಲ್ಲಿರುವ ಲಿಖಿತ ಮೂಲಕ ಉತ್ತರಿಸುವ 123 ಪ್ರಶ್ನೆಗಳ ಪೈಕಿ 95 ಪ್ರಶ್ನೆಗಳಿಗೆ ಉತ್ತರವನ್ನು ಸದನದಲ್ಲಿ ಮಂಡಿಸುತ್ತಿದ್ದೇನೆ.

ಸೋಮವಾರ ಪೇಟೆ ತಾಲ್ಲೂಕು ಆಲೂರು ಸಿದ್ದಾಪುರ ಸರ್ಕಾರಿ ಕಿರಿಯ ಕಾಲೇಜಿನ ಕಟ್ಟಡ ನಿರ್ಮಾಣ

1896 (2362) ಶ್ರೀ ಅಪ್ಪಚ್ಚುರಂಜನ್ (ಸೋಮವಾರಪೇಟೆ) : ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕೊಡುಗು ಜಿಲ್ಲೆ ಸೋಮವಾರಪೇಟೆ ತಾಲ್ಲೂಕು ಆಲೂರು ಸಿದ್ದಾಪುರ ಸರ್ಕಾರಿ ಕಿರಿಯ ಕಾಲೇಜಿನ ಕಟ್ಟಡ ನಿರ್ಮಾಣಕ್ಕೆ ಅಂದಾಜು ಪಟ್ಟಿ ತಯಾರಿಸಿ ಆಡಳಿತಾತ್ಮಕ ಮಂಜೂರಾತಿಗಾಗಿ ಸರ್ಕಾರಕ್ಕೆ 3 ವರ್ಷಗಳ ಹಿಂದೆ ಕಳುಹಿಸಿರುವುದು ನಿಜವೆ;

ಆ) ಈ ಕಿರಿಯ ಕಾಲೇಜು ಪ್ರಾರಂಭವಾಗಿ 7 ವರ್ಷಗಳ ಹಿಂದೆ ಕಳುಹಿಸಿರುವುದು ನಿಜವೆ;

ಇ) ಹಾಗಿದ್ದಲ್ಲಿ, ಈ ಕಿರಿಯ ಕಾಲೇಜಿನ ಕಟ್ಟಡ ನಿರ್ಮಾಣವನ್ನು ಯಾವಾಗ ಕೈಗೊಳ್ಳಲಾಗುವುದು?

ಶ್ರೀ ಹೆಚ್.ವಿಶ್ವನಾಥ್ (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು) :

ಅ) ಇಲ್ಲ.

ಆ) ಪ್ರೌಢಶಾಲೆಯನ್ನೆ 1994-95ನೇ ಸಾಲಿನಲ್ಲಿ ಸಂಯುಕ್ತ ಕಾಲೇಜಾಗಿ ಪರಿವರ್ತಿಸಲಾಗಿದೆ. 5 ಕೊಠಡಿಗಳುಳ್ಳ ಕಟ್ಟಡವಿದ್ದು ಸದರಿ ಕೊಠಡಿಗಳನ್ನೆ ಪದವಿ ಪೂರ್ವ ತರಗತಿಗಳಿಗೂ ಉಪಯೋಗವಾಗುತ್ತಿದೆ.

ಇ) ಸದರಿ ಕಾಲೇಜಿನಲ್ಲಿ ಕಳೆದ ಎರಡು ವರ್ಷಗಳಲ್ಲಿ ವ್ಯಾಸಂಗ ಮಾಡಿ ದ್ವೀತಿಯ ಪಿ.ಯು.ಸಿ. ಪರೀಕ್ಷೆಗೆ ಹಾಜರಾಗಿ ಉತ್ತೀರ್ಣರಾದವರ ವಿವರಗಳು:-

ವರ್ಷ	ಹಾಜರಾದವರು	ಉತ್ತೀರ್ಣರಾದವರು
1998 ಏಪ್ರಿಲ್	19	10
1999 ಏಪ್ರಿಲ್	28	08

ವಿದ್ಯಾರ್ಥಿಗಳ ಸಂಖ್ಯೆ ಅತಿ ಕಡಿಮೆ ಇರುವುದರಿಂದ ಸದರಿ ಕಟ್ಟಡವೇ ಸಾಕಾಗುತ್ತದೆ. ಆದ್ದರಿಂದ, ಹೊಸ ಕಟ್ಟಡದ ಅವಶ್ಯಕತೆ ಕಂಡು ಬರುವುದಿಲ್ಲ.